# ಇಂಡೋ-ತೈವಾನ್ -ಯುಎಸ್ ತರಬೇತಿ
# ವಿಡಿಐಟಿ ವಿದ್ಯಾರ್ಥಿನಿಯರ ಸಾಧನೆ





**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಹಳಿಯಾಳದ ಎಲೆಕ್ಟ್ರಾನಿಕ್ಸ್ ಆ್ಯಂಡ್ ಕಮ್ಯುನಿಕೇಶನ್ ವಿಭಾಗದ ವಿದ್ಯಾರ್ಥಿನಿಯರಾದ ಸ್ನೇಹಾ ಚಂಗೊಲಿ ಹಾಗೂ ಧನ್ಯಾ ಕುಲಕರ್ಣಿ ಪ್ರತಿಷ್ಠಿತ ಭಾರತೀಯ ತಂತ್ರಜ್ಞಾನ ಸಂಸ್ಥೆ ನೀಡುತ್ತಿರುವ ತರಬೇತಿಯಲ್ಲಿ ಗಮನಾರ್ಹ ಸಾಧನೆಗೈದಿದ್ದಾರೆ.

ಭಾರತೀಯತಂತ್ರಜ್ಞಾನಸಂಸ್ಥೆ( ಐಐಟಿ )ಹೈದರಾಬಾದ್ ಇಂಡೋ-ತೈವಾನ್ -ಯುಎಸ್‌ನ ಸಂಯುಕ್ತ ಆಶ್ರಯದಲ್ಲಿ ವಿಎಲ್‌ಎಸ್‌ಐ ತಂತ್ರಜ್ಞಾನದ ಕುರಿತು ನೀಡುತ್ತಿರುವ ಪ್ರಾಯೋಗಿಕ ತರಬೇತಿಯ ಎರಡನೇ ಹಂತಕ್ಕೆ ಸ್ನೇಹಾ ಚಂಗೊಲಿ ಆಯ್ಕೆಯಾಗಿದ್ದಾಳೆ.

ರಾಷ್ಟ್ರದ600ವಿದ್ಯಾರ್ಥಿಗಳುಮೊದಲನೇ ಹಂತದ ತರಬೇತಿಗೆ ಆಯ್ಕೆಯಾಗಿದ್ದರು. ಕೇವಲ 45 ವಿದ್ಯಾರ್ಥಿಗಳು ಎರಡನೇ ಹಂತದ ಪ್ರಾಯೋಗಿಕ ತರಬೇತಿಗೆ ಆಯ್ಕೆಯಾಗಿದ್ದಾರೆ. ಸ್ನೇಹಾ ಇದರಲ್ಲಿ ಒಬ್ಬಳಾಗಿದ್ದಾಳೆ. ತರಬೇತಿ ಯಶಸ್ವಿಯಾಗಿ ಸಂಪೂರ್ಣಗೊಳಿಸಿದ ವಿದ್ಯಾರ್ಥಿಗಳು ವಿಎಲ್‌ಎಸ್‌ಐ ತಂತ್ರಜ್ಞಾನದ ಕುರಿತು ತೈವಾನ್‌ನಲ್ಲಿ ಹೆಚ್ಚಿನ ತರಬೇತಿ ಪಡೆದುಕೊಳ್ಳಲಿದ್ದಾರೆ.

ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಧಾರವಾಡ ವಿಎಲ್‌ಎಸ್‌ಐ ವಿನ್ಯಾಸ ಹಾಗೂ ತಂತ್ರಜ್ಞಾನದ ಕುರಿತು ನೀಡುತ್ತಿರುವ ಎರಡು ತಿಂಗಳ ತರಬೇತಿ ಕಾರ್ಯಕ್ರಮಕ್ಕೆ ಧನ್ಯಾ ಕುಲಕರ್ಣಿ ಆಯ್ಕೆಯಾಗಿದ್ದಾಳೆ. ಐಐಟಿ ಧಾರವಾಡ ತರಬೇತಿ ಯಶಸ್ವಿಯಾಗಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಿದೆ.

ಎಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥ ಡಾ.ಮಹೇಂದ್ರ ದೀಕ್ಷಿತ್ ಮತ್ತು ಪ್ರೊ.ಪೂಜಾ ಶಿಂಧೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ. ಮಹಾವಿದ್ಯಾಲಯದ ವಿದ್ಯಾರ್ಥಿಗಳು ದೇಶದ ಪ್ರತಿಷ್ಠಿತ ವಿದ್ಯಾಸಂಸ್ಥೆ ಐಐಟಿಗಳಲ್ಲಿ ತರಬೇತಿ ಪಡೆದುಕೊಳ್ಳುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ ಲೋಕುರ್ ಮತ್ತು ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಮತ್ತು ಎಲ್ಲ ಸಿಬ್ಬಂದಿ ಶುಭ ಕೋರಿದ್ದಾರೆ.

# ತರಬೇತಿಯಲ್ಲಿ ವಿಡಿಐಟಿ ಉತ್ತಮ ಸಾಧನೆ

**ಹಳಿಯಾಳ:** ಕೆಎಲ್‌ಎಸ್‌ವಿಡಿಐಟಿ ಹಳಿಯಾಳದ ಎಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಶನ್ ವಿಭಾಗದ ವಿದ್ಯಾರ್ಥಿನಿಯರಾದ ಸ್ನೇಹಾ ಚಂಗೊಲಿ ಹಾಗೂ ಧನ್ಯಾ ಕುಲಕರ್ಣಿ ಪ್ರತಿಷ್ಠಿತ ಭಾರತೀಯ ತಂತ್ರಜ್ಞಾನ ಸಂಸ್ಥೆ ನೀಡುತ್ತಿರುವ ತರಬೇತಿಯಲ್ಲಿ ಗಮನಾರ್ಹ ಸಾಧನೆಗೈದಿದ್ದಾರೆ.





ಭಾರತೀಯ ತಂತ್ರಜ್ಞಾನ ಸಂಸ್ಥೆ(ಐಐಟಿ) ಹೈದರಾಬಾದ್ ಇಂಡೋ - ತೈವಾನ್ -ಯುಎಸ್‌ನ ಸಂಯುಕ್ತ ಆಶ್ರಯದಲ್ಲಿ ವಿಎಲ್‌ಎಸ್‌ಐ ತಂತ್ರಜ್ಞಾನದ ಕುರಿತು ನೀಡುತ್ತಿರುವ ಪ್ರಾಯೋಗಿಕ ತರಬೇತಿಯ ಎರಡನೇ ಹಂತಕ್ಕೆಕುಮಾರಿ. ಸ್ನೇಹಾ ಚಂಗೊಲಿ ಆಯ್ಕೆಯಾಗಿದ್ದಾಳೆ. ರಾಷ್ಟದ 600 ವಿದ್ಯಾರ್ಥಿಗಳು ಮೊದಲನೇ ಹಂತದ ತರಬೇತಿಗೆ ಆಯ್ಕೆಯಾಗಿದ್ದರು, ಕೇವಲ 45 ವಿದ್ಯಾರ್ಥಿಗಳು ಎರಡನೇ ಹಂತದ ಪ್ರಾಯೋಗಿಕ ತರಬೇತಿಗೆ ಆಯ್ಕೆಯಾಗಿದ್ದಾರೆ. ಸ್ನೇಹಾ ಇದರಲ್ಲಿ ಒಬ್ಬಳಾಗಿದ್ದಾಳೆ. ತರಬೇತಿಯಶಸ್ವಿಯಾಗಿ ಸಂಪೂರ್ಣಗೊಳಿಸಿದ ವಿದ್ಯಾರ್ಥಿಗಳು ವಿಎಲ್‌ಎಸ್‌ಐ ತಂತ್ರಜ್ಞಾನದ ಕುರಿತು ತೈವಾನ್‌ನಲ್ಲಿ ಹೆಚ್ಚಿನ ತರಬೇತಿಯನ್ನು ಪಡೆದುಕೊಳ್ಳಲಿದ್ದಾರೆ.

ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ) ಧಾರವಾಡವುವಿ ಎಲ್ ಎಸ್‌ಐ ವಿನ್ಯಾಸ ಹಾಗೂ ತಂತ್ರಜ್ಞಾನದ ಕುರಿತು ನೀಡುತ್ತಿರುವ ಎರಡು ತಿಂಗಳ ತರಬೇತಿ ಕಾರ್ಯಕ್ರಮಕ್ಕೆ ಧನ್ಯಾ ಕುಲಕರ್ಣಿ ಆಯ್ಕೆಯಾಗಿದ್ದಾಳೆ. ಐಐಟಿ ಧಾರವಾಡವು ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಿದೆ.

ಎಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥ ಡಾ. ಮಹೇಂದ್ರ, ದೀಕ್ಷಿತ್ ಮತ್ತು ಪ್ರೊ. ಪೂಜಾ ಶಿಂಧೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ.

ಮಹಾವಿದ್ಯಾಲಯದ ವಿದ್ಯಾರ್ಥಿಗಳು ದೇಶದ ಪ್ರತಿಷ್ಠಿತ ವಿದ್ಯಾಸಂಸ್ಥೆ ಐಐಟಿಗಳಲ್ಲಿ ತರಬೇತಿ ಪಡೆದುಕೊಳ್ಳುತ್ತಿರುವುದು ಹೆಮ್ಮೆಯ ವಿಷಯವಾಗಿದ್ದು, ವಿದ್ಯಾರ್ಥಿಗಳಿಗೆ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ ಲೋಕುರ್ ಮತ್ತು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ಹರ್ಷ ವ್ಯಕ್ತಪಡಿಸಿದ್ದಾರೆ.